ಬಸವಕಲ್ಯಾಣ ಕ್ಷೇತ್ರದಲ್ಲಿ ಕೆ.ಯು.ಐ.ಡಿ.ಎಫ್.ಸಿ. ಯಿಂದ ತೆಗೆದುಕೊಂಡಿರುವ ಅಭಿವೃದ್ಧಿ ಕಾರ್ಯಗಳು.

117 (298) ಶ್ರೀ ಬಸವರಾಜ ಪಾಟೀಲ್ ಅಟ್ಟೂರು : ಮಾನ್ಯ ಕಾನೂನು ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನರಚನೆ ಮತ್ತು ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೂಲಭೂತ ಸೌಲಭ್ಯ ಅಭಿವೃದ್ಧಿ ಇಲಾಖೆಯವತಿಯಿಂದ ಬಸವಕಲ್ಯಾಣ ಮತಕ್ಷೇತ್ರದಲ್ಲಿ ಕಳೆದ ಮೂರು ವರ್ಷದ ಅವಧಿಯಲ್ಲಿ ಯಾವ ಯಾವ ಅಭಿವೃದ್ಧಿ ಕಾರ್ಯಗಳನ್ನು ತೆಗೆದುಕೊಳ್ಳಲಾಗಿದೆ;

ಆ) ಇದಕ್ಕಾಗಿ ಪ್ರತಿ ವರ್ಷ ವೆಚ್ಚ ಮಾಡಲಾದ ಹಣವೆಷ್ಟು;

ಇ) ಪ್ರಸಕ್ತ ಸಾಲಿನಲ್ಲಿ ಯಾವ ಯಾವ ಅಭಿವೃದ್ಧಿ ಕಾರ್ಯಗಳನ್ನು ಕೆ.ಯು.ಐ.ಡಿ.ಎಫ್.ಸಿ ಯಿಂದ ತೆಗೆದುಕೊಳ್ಳಲಾಗುವುದು?

ಶ್ರೀ ಎಸ್. ಸುರೇಶ್ ಕುಮಾರ್ (ಕಾನೂನು ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನರಚನೆ ಮತ್ತು ನಗರಾಭಿವೃದ್ಧಿ ಸಚಿವರು) :

ಅ) ಮತ್ತು ಆ)

ಬಸವ ಕಲ್ಯಾಣ ನಗರ ಸಭೆಗೆ ಅಭಿವೃದ್ಧಿ ಕಾರ್ಯಗಳಿಗಾಗಿ ಎಸ್‌ಎಫ್‌ಸಿ ಹಾಗೂ ಟಿಎಫ್‌ಸಿ ಅನುದಾನದಡಿ ಅನುದಾನ ಒದಗಿಸಲಾಗಿರುತ್ತದೆ. ಕಳೆದ ಮೂರು ವರ್ಷದ ಅನುದಾನದ ವಿವರ ಈ ಕೆಳಕಂಡಂತಿದೆ:

(ರೂ. ಲಕ್ಷಗಳಲ್ಲಿ)

	2006-07	**2007-08**	**2008-09**
SFC	205.75	359.63	301.66
TFC	87.95	111.84	149.84

ಇ) ಏಷ್ಯಿಯನ್ ಅಭಿವೃದ್ಧಿ ಬ್ಯಾಂಕ್ ನೆರವಿನಿಂದ ಅನುಷ್ಠಾನಗೊಳ್ಳುತ್ತಿರುವ ಉತ್ತರ ಕರ್ನಾಟಕ ನಗರ ವಲಯ ಬಂಡವಾಳ ಹೂಡಿಕಾ ಕಾರ್ಯಕ್ರಮದಡಿಯಲ್ಲಿ ಬಸವಕಲ್ಯಾಣದಲ್ಲಿ ಈ ಕೆಳಕಾಣಿಸಿದ ಅಭಿವೃದ್ಧಿ ಕಾರ್ಯಗಳನ್ನು ಆಯೋಜಿಸಲಾಗಿದೆ.

- ನೀರು ಸರಬರಾಜು ಯೋಜನೆ (26.6 ಕೋಟಿ),
- ಪ್ರವಾಸೋದ್ಯಮ ಅಭಿವೃದ್ಧಿ (ರೂ. 2.18 ಕೋಟಿ),
- ಕೊಳಚೆ ಪ್ರದೇಶಾಭಿವೃದ್ಧಿ (ರೂ. 1.42 ಕೋಟಿ), ಅಗ್ನಿಶಾಮಕ ಮತ್ತು ತುರ್ತು ಸೇವೆಗಳು (ರೂ. 0.89 ಕೋಟಿ)

ಬಸವ ಕಲ್ಯಾಣದಲ್ಲಿ ಪ್ರವಾಸಿ ತಾಣಗಳ ಅಭಿವೃದ್ಧಿ

118 (299) ಶ್ರೀ ಬಸವರಾಜ ಪಾಟೀಲ್ ಅಟ್ಟೂರು : ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಸವಕಲ್ಯಾಣದಲ್ಲಿ ಯಾವ ಯಾವ ಸ್ಥಳಗಳನ್ನು ಪ್ರವಾಸಿ ತಾಣಗಳೆಂದು ಗುರುತಿಸಲಾಗಿದೆ;

ಆ) ಈ ಸ್ಥಳವನ್ನು ಅಭಿವೃದ್ಧಿ ಪಡಿಸಲು ಸರ್ಕಾರ ಕಳೆದ ಮೂರು ವರ್ಷಗಳಿಂದ ಎಷ್ಟು ಹಣವನ್ನು ವೆಚ್ಚ ಮಾಡಲಾಗಿದೆ;

ಇ) ಬಸವಕಲ್ಯಾಣ ತಾಲ್ಲೂಕಿನ ಯಾವ ಯಾವ ಪ್ರವಾಸಿ ಸ್ಥಳದ ಅಭಿವೃದ್ಧಿಗಾಗಿ ಕೇಂದ್ರ ಸರ್ಕಾರದ ನೆರವು ಕೋರಲಾಗಿದೆ;

ಈ) ಈ ಬಗ್ಗೆ ಕೇಂದ್ರದಿಂದ ಇಲ್ಲಿಯವರೆವಿಗೆ ಬಂದಿರುವ ಹಣದ ಮೊತ್ತವೆಷ್ಟು;

ಉ) ಬಸವಕಲ್ಯಾಣದಲ್ಲಿ ಪ್ರವಾಸಿಗರು ಹಾಗೂ ಭಕ್ತಾಧಿಗಳಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಸರ್ಕಾರದ ಮುಂದಿರುವ ಕ್ರಮಗಳೇನು?

ಶ್ರೀ ಜಿ.ಜನಾರ್ಧನ ರೆಡ್ಡಿ (ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಸಚಿವರು) :

ಅ) ಬಸವಕಲ್ಯಾಣವನ್ನು ಪ್ರವಾಸಿ ತಾಣವೆಂದು ಗುರುತಿಸಲಾಗಿದೆ. ಈ ಪ್ರವಾಸಿ ತಾಣದಲ್ಲಿ ಇರುವ ಪ್ರೇಕ್ಷಣೀಯ ಸ್ಥಳಗಳೆಂದರೆ,

1. ಬಸವಕಲ್ಯಾಣದ ಕೋಟೆ.
2. ಅಕ್ಕ ನಾಗಮ್ಮ ಗವಿ
3. ಅಲ್ಲಮಪ್ರಭು ಗದ್ದುಗೆ